ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ 15 ಗ್ರಾಪಸ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:17-12-2018

## ಸುತ್ತೋಲೆ

**ವಿಷಯ:** 13ನೇ ಮತ್ತು 14ನೇ ಹಣಕಾಸು ಆಯೋಗದ ಅನುದಾನಕ್ಕೆ ಸಂಬಂಧಪಟ್ಟಂತೆ ಕೆಲವೊಂದು ಅಂಶಗಳ ಬಗ್ಗೆ ಸ್ಪಷ್ಟೀಕರಣ ನೀಡುವ ಕುರಿತು.

**ಉಲ್ಲೇಖ:**
1. ಭಾರತ ಸರ್ಕಾರದ ಪತ್ರ ಸಂಖ್ಯೆ:12(32), ಎಫ್‌ಎಫ್‌ಸಿ/ ಎಫ್‌ಸಿಡಿ/2015-16, ದಿನಾಂಕ:08-10-2015.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 75 ಗ್ರಾಪಸ 2015, ದಿನಾಂಕ:03-02-2018.
3. ದಿನಾಂಕ:28-11-2018 ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನೀಡಿರುವ ಸೂಚನೆಗಳು.

*****

13ನೇ ಮತ್ತು 14ನೇ ಹಣಕಾಸು ಆಯೋಗದ ಅನುದಾನಗಳಿಗೆ ಸಂಬಂಧಿಸಿದಂತೆ ಉಲ್ಲೇಖ(3)ರ ಸಭೆಯಲ್ಲಿ ಕೆಲವು ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸ್ಪಷ್ಟೀಕರಣ/ ಸಲಹೆಗಳನ್ನು ನೀಡುವಂತೆ ಸರ್ಕಾರವನ್ನು ಕೋರಿರುವ ಹಿನ್ನೆಲೆಯಲ್ಲಿ, ಈ ಕೆಳಕಂಡ ಸೂಚನೆಗಳನ್ನು ನೀಡಲಾಗಿದೆ.

1. 2014-15ನೇ ಸಾಲಿನ 13ನೇ ಹಣಕಾಸು ಆಯೋಗ ಅನುದಾನದಡಿ 2ನೇ ಕಂತಿನ ಸಾಮಾನ್ಯ ನಿರ್ವಹಣಾ ಅನುದಾನ ರೂ.363.75ಕೋಟಿಗಳನ್ನು ಕೇಂದ್ರ ಸರ್ಕಾರವು ಬಿಡುಗಡೆ ಮಾಡದೇ ಇರುವ ಪ್ರಯುಕ್ತ ಬಹುತೇಕ ಜಿಲ್ಲೆಗಳಲ್ಲಿ ಕಾಮಗಾರಿಗಳ ಬಿಲ್ಲುಗಳು ಪಾವತಿಗಾಗಿ ಬಾಕಿ ಉಳಿದಿರುತ್ತದೆ. ಈ ಕುರಿತು ಸರ್ಕಾರದಿಂದ ಈಗಾಗಲೇ ಪತ್ರ ಸಂಖ್ಯೆ:ಗ್ರಾಅಪ 15 ಗ್ರಾಪಸ 2015, ದಿನಾಂಕ:18-06-2016ರಲ್ಲಿ "ಪಾವತಿ ಮಾಡದೇ ಇರುವ ಬಾಕಿ ಕಾಮಗಾರಿಗಳನ್ನು 2016-17ನೇ ಸಾಲಿನ ವಿವಿಧ ಯೋಜನೆಗಳಲ್ಲಿ ಲಭ್ಯವಿರುವ ಅನುದಾನದಲ್ಲಿ (ಯೋಜನೆಯ ಮಾರ್ಗಸೂಚಿಗೆ ಅನುಗುಣವಾಗಿದ್ದರೆ ಮಾತ್ರ) ಅಳವಡಿಸಿಕೊಂಡು ಅನುಷ್ಠಾನಗೊಳಿಸುವಂತೆ" ತಿಳಿಸಲಾಗಿರುತ್ತದೆ. ಇದರಿಂದ ಬಹುತೇಕ ಗ್ರಾಮ ಪಂಚಾಯತಿಗಳು ಸಂಬಂಧಪಟ್ಟ ಬಾಕಿ ಬಿಲ್ಲುಗಳನ್ನು ಮುಂದಿನ ಸಾಲಿನ ಕ್ರಿಯಾಯೋಜನೆಗಳಲ್ಲಿ ಸೇರಿಸಿಕೊಂಡು ಪಾವತಿಸಲು ಕ್ರಮವಹಿಸಿರುತ್ತವೆ. 13ನೇ ಹಣಕಾಸು ಆಯೋಗದ ಅನುದಾನದಲ್ಲಿ ಎಲ್ಲಾ 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅನುದಾನ ನೀಡಲಾಗುತ್ತಿತ್ತು. ಆದರೆ, 14ನೇ ಹಣಕಾಸು

ಆಯೋಗದಲ್ಲಿ ಕೇವಲ ಗ್ರಾಮ ಪಂಚಾಯತಿಗಳಿಗೆ ಮಾತ್ರ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ. ಇದರಿಂದಾಗಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳ ಬಾಕಿ ಬಿಲ್ಲುಗಳಿಗೆ ಅನುದಾನ ಕಲ್ಪಿಸಲು ಕಷ್ಟಕರವಾಗಿರುವುದರಿಂದ ಈ ಬಗ್ಗೆ ಸರ್ಕಾರದಿಂದ ಸೂಕ್ತ ನಿರ್ದೇಶನ ನೀಡಬೇಕೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ರವರು ಸಭೆಯಲ್ಲಿ ಕೋರಿರುತ್ತಾರೆ.

**ಸ್ಪಷ್ಟೀಕರಣ:**

ಮೇಲಿನ ಅಂಶದ ಕುರಿತು ಸಭೆಯಲ್ಲಿ ಚರ್ಚಿಸಲಾಗಿ, 13ನೇ ಹಣಕಾಸು ಆಯೋಗದ ಅವಧಿಯು ದಿನಾಂಕ:31-03-2015 ರಂದು ಮುಗಿದಿರುವ ಪ್ರಯುಕ್ತ ಇದರ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಹಂತದಲ್ಲಿಯೇ ನಿಯಮಾನುಸಾರ ಕ್ರಮವಹಿಸಲು ಈ ಮೂಲಕ ತಿಳಿಸಲಾಗಿದೆ.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರು 2018-19ನೇ ಸಾಲಿನ 14ನೇ ಹಣಕಾಸು ಆಯೋಗ ಅನುದಾನದ ಕ್ರಿಯಾಯೋಜನೆಯನ್ನು ತಯಾರಿಸುವ ಬಗ್ಗೆ ಸ್ಪಷ್ಟೀಕರಣವನ್ನು ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ. ಅದರಲ್ಲಿ 2016-17ನೇ ಮತ್ತು 2017-18ನೇ ಸಾಲಿನಲ್ಲಿ ಬಿಡುಗಡೆಯಾದ 1ನೇ ಮತ್ತು 2ನೇ ಕಂತಿನ ಸಾಮಾನ್ಯ ಮೂಲ ಅನುದಾನಕ್ಕೆ ವ್ಯತ್ಯಾಸ ಇರುವ ಪ್ರಯುಕ್ತ ಅನುದಾನದ ಹಂಚಿಕೆಯ ಆಧಾರದ ಮೇಲೆ ಅಥವಾ ಅನುದಾನದ ಬಿಡುಗಡೆ ಆಧಾರದ ಮೇಲೆ ಕ್ರಿಯಾಯೋಜನೆಯನ್ನು ಸಿದ್ಧಪಡಿಸುವ ಬಗ್ಗೆ ಸ್ಪಷ್ಟೀಕರಣವನ್ನು ಕೋರಿದ್ದು, 1ನೇ ಮತ್ತು 2ನೇ ಕಂತಿನ ಸಾಮಾನ್ಯ ಮೂಲ ಅನುದಾನಗಳಿಗೆ ಸಂಬಂಧಿಸಿದಂತೆ ಒಂದೇ ಕ್ರಿಯಾಯೋಜನೆಯನ್ನು ತಯಾರಿಸಿ "ನಮ್ಮ ಗ್ರಾಮ ನಮ್ಮ ಯೋಜನೆ' ತಂತ್ರಾಂಶದಲ್ಲಿ ಅಳವಡಿಸಲು ಸೂಚಿಸಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು.

**ಸ್ಪಷ್ಟೀಕರಣ:**

ಇದರ ಬಗ್ಗೆ ಉಪಕಾರ್ಯದರ್ಶಿ, ಆರ್ಥಿಕ ಆಯೋಗ ಕೋಶ, ಆರ್ಥಿಕ ಇಲಾಖೆಯವರ ಅಭಿಪ್ರಾಯವನ್ನು ಕೇಳಿದ್ದು, ಅವರು "restrict action plan to the amount of grants received" ಎಂದು ಅವರ ಟಿಪ್ಪಣಿ ಸಂಖ್ಯೆ:ಆಇ 101 ಆಆಕೋ 2018, ದಿನಾಂಕ: 23-11-2018ರಲ್ಲಿ ಅಭಿಪ್ರಾಯವನ್ನು ನೀಡಿರುತ್ತಾರೆ. ಅದೇ ರೀತಿ ಇ-ಆಡಳಿತ ಶಾಖೆಯವರು ಗ್ರಾಮ ಪಂಚಾಯತಿಗಳು ಮೂಲ ಕ್ರಿಯಾಯೋಜನೆಯೊಂದಿಗೆ 4 ಪೂರಕ ಕ್ರಿಯಾಯೋಜನೆಗಳನ್ನು ಅನುದಾನದ ಲಭ್ಯತೆಯ ಅನುಸಾರ ಸಿದ್ಧಪಡಿಸಿ ಪ್ಲಾನ್‌ಪ್ಲಸ್‌ನಲ್ಲಿ ಅಳವಡಿಸಲು ಅವಕಾಶ ಕಲ್ಪಿಸಿರುವ ಅಂಶವನ್ನು ಗಮನಕ್ಕೆ ತರುತ್ತಾ, 14ನೇ ಹಣಕಾಸು ಆಯೋಗದ ಸಾಮಾನ್ಯ ಮೂಲ ಅನುದಾನದ 2ನೇ ಕಂತಿನ ಮೊತ್ತಕ್ಕೆ ಮತ್ತು ಕಾರ್ಯಕ್ಷಮತೆ ಅನುದಾನಕ್ಕೆ ಪೂರಕ ಕ್ರಿಯಾ ಯೋಜನೆಗಳನ್ನು ಸಿದ್ಧಪಡಿಸಿ, ಜಿಲ್ಲಾ ಪಂಚಾಯತ್ ಮುಖ್ಯ

ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಅನುಮೋದನೆ ಪಡೆದು ಪ್ಲಾನ್‌ಪ್ಲಸ್‌ನಲ್ಲಿ ಅಳವಡಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ.

3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ ಇವರು ಸರ್ಕಾರದ ಉಲ್ಲೇಖ(2)ರ ಸುತ್ತೋಲೆಯಲ್ಲಿ 14ನೇ ಹಣಕಾಸು ಆಯೋಗದ ಅನುದಾನವನ್ನು ವಿನಿಯೋಗಿಸುವ ಮಾರ್ಗಸೂಚಿಗಳಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ತೆಗೆದುಕೊಳ್ಳಬಹುದಾದ ಕೆಲವು ಕಾಮಗಾರಿಗಳನ್ನು 14ನೇ ಹಣಕಾಸು ಆಯೋಗದ ಅನುದಾನದಲ್ಲಿ ತೆಗೆದುಕೊಳ್ಳಲು ತಿಳಿಸಿರುತ್ತೀರಿ ಎಂದು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಬಹುತೇಕ ಗ್ರಾಮ ಪಂಚಾಯತಿಗಳು ಇಂತಹ ಕಾಮಗಾರಿಗಳಿಗೆ ಆದ್ಯತೆ ನೀಡಿದ್ದು, ಕುಡಿಯುವ ನೀರಿನ ಕಾಮಗಾರಿಗಳಿಗೆ ಕೆಲವು ಪಂಚಾಯತಿಗಳು ಸೂಕ್ತ ಆದ್ಯತೆ ನೀಡದೇ ಇರುವುದು ತಿಳಿದುಬಂದಿರುತ್ತದೆ. ಈ ಕುರಿತು ಸೂಕ್ತ ನಿರ್ದೇಶನ ನೀಡುವಂತೆ ಸಭೆಯಲ್ಲಿ ಕೋರಿರುತ್ತಾರೆ.

**ನಿರ್ದೇಶನ:**

ಸರ್ಕಾರದ ಉಲ್ಲೇಖ(2)ರ ಸುತ್ತೋಲೆಯಲ್ಲಿ ಕುಡಿಯುವ ನೀರು ಮತ್ತು ಸರಬರಾಜು ಘಟಕಕ್ಕೆ ಕನಿಷ್ಠ 20% ಅನುದಾನವನ್ನು ಮೀಸಲಿಡುವಂತೆ ತಿಳಿಸಿದರೂ ಸಹ ರಾಜ್ಯದ ಬಹುತೇಕ ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿ ಇರುವ ಪ್ರಯುಕ್ತ ಹೆಚ್ಚಿನ ಅನುದಾನವನ್ನು ಕುಡಿಯುವ ನೀರು ಸರಬರಾಜು ಕಾಮಗಾರಿಗಳಿಗೆ ಆದ್ಯತೆ ಹಾಗೂ ಅವಶ್ಯಕತೆಯನುಸಾರ ಉಪಯೋಗಿಸಲು ತಿಳಿಸಿ, ಉಳಿದ ಕಾಮಗಾರಿಗಳನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ತೆಗೆದುಕೊಳ್ಳಲು ಈ ಮೂಲಕ ಸೂಚಿಸಲಾಗಿದೆ.

ಮೇಲ್ಕಂಡ ಸ್ಪಷ್ಟೀಕರಣಗಳು/ಸೂಚನೆಗಳು ಉಲ್ಲೇಖ(1)ರ ಕೇಂದ್ರ ಸರ್ಕಾರದ 14ನೇ ಹಣಕಾಸು ಆಯೋಗ ಅನುದಾನದ ಮಾರ್ಗಸೂಚನೆಗಳಿಗೆ ಒಳಪಟ್ಟಿರುತ್ತದೆ. ಯಾವುದೇ ಕಾರಣಕ್ಕೂ ಕೇಂದ್ರ ಸರ್ಕಾರದಿಂದ ನೀಡಿದ ಮಾರ್ಗಸೂಚಿಗಳನ್ನು ಉಲ್ಲಂಘನೆ ಆಗದಂತೆ ಎಚ್ಚರಿಕೆ ವಹಿಸಲು ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಿದೆ.

(ಎಸ್.ಎಂ.ಜುಲ್‌ಫಿಖಾರ್‌ಉಲ್ಲಾ)
ನಿರ್ದೇಶಕರು(ಪಂ.ರಾಜ್-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

17.12.18

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ (ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
3. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು ರವರ ಮಾಹಿತಿಗಾಗಿ.

4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

<u>ಪ್ರತಿ:</u>

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರ ಮಾಹಿತಿಗಾಗಿ.
3. ನಿರ್ದೇಶಕರು (ಪಂ.ರಾಜ್-1 ಮತ್ತು 2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
4. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ